Akashvani: Bangalore
Regional Bulletin In Kannada
01.12.2025 : 14.30hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು:

- ಇ-ಸ್ವತ್ತು ೨.೦ ತಂತ್ರಾಂಶಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ; ಗಾಂಧಿ ಗ್ರಾಮ ಪುರಸ್ಕಾರ ವಿತರಣೆ
- ಇಂದು ವಿಧಾನಸೌಧದ ನಿರ್ಮಾತೃ, ಕೆಂಗಲ್ ಹನುಮಂತಯ್ಯನವರ ಪುಣ್ಯಸ್ಮರಣೆ; ಮುಖ್ಯಮಂತ್ರಿ , ಉಪಮುಖ್ಯಮಂತ್ರಿಯಿಂದ ಪುಷ್ಪ ನಮನ
- ವಿಶ್ವ ಏಡ್ಸ್ ಜಾಗೃತಿ ದಿನ; ರಾಜ್ಯದ ವಿವಿಧೆಡೆ ಜಾಗೃತಿ ಕಾರ್ಯಕ್ರಮ
- ರಾಜ್ಯದಲ್ಲಿ ನವೋದ್ಯಮ ಹೂಡಿಕೆಯಲ್ಲಿ ಕುಸಿತ- ಸರ್ಕಾರದ ಬಿಜೆಪಿ ಅಸಮಾಧಾನ

<>><><*><><<>

ವಿಧಾನಸೌಧದಲ್ಲಿಂದು ಮುಖ್ಯಮಂತ್ರಿ ಸಿದ್ದರಾಮಯ್ಯ ೨೦೨೩-೨೪ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರ ವಿತರಿಸಿ, ಇ-ಸ್ವತು ೨.೦ ತಂತ್ರಾಂಶಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಗಾಂಧಿ ಗ್ರಾಮ ಪುರಸ್ಕಾರ ಸ್ವೀಕರಿಸಿದ ಎಲ್ಲರಿಗೂ ಅಭಿನಂದಿಸಿದರು. ಗ್ರಾಮ ಭಾರತ ಅಭಿವೃದ್ಧಿಯಾಗದೇ ದೇಶದ ಅಭಿವೃದ್ಧಿ ಸಾಧ್ಯವಿಲ್ಲ ಎಂದು ತಿಳಿಸಿದರು. ಈ ಸ್ವತ್ತು ತಂತ್ರಾಂಶದಿಂದ ಒಂದು ಸಾವಿರದ ೭೭೮ ಕೋಟಿ ರೂಪಾಯಿ ತೆರಿಗೆ ಆದಾಯ ಹೆಚ್ಚಾಗುವ ಅಂದಾಜಿದೆ. ತಂತ್ರಾಂಶ ಪರಿಣಾಮಕಾರಿಯಾಗಿ ಜಾರಿಯಾದರೆ, ಆದಾಯದ ಪ್ರಮಾಣ ೨ ಸಾವಿರ ಕೋಟಿ ರೂಪಾಯಿಗೂ ಹೆಚ್ಚಾಗುವ ನಿರೀಕ್ಷೆಯಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರದ 'ಜಲ್ ಜೀವನ್ ಮಿಷನ್' ಯೋಜನೆಯಲ್ಲಿ ರಾಜ್ಯದ ಪಾಲು ಹೆಚ್ಚಿದ್ದು, ಕೇಂದ್ರ ಸರ್ಕಾರದಿಂದ ಇನ್ನೂ ೧೩ ಸಾವಿರ ಕೋಟಿ ರೂಪಾಯಿ ಹಣ ರಾಜ್ಯಕ್ಕೆ ಬರಬೇಕಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಇ-ಆಸ್ತಿ ೨.೦ ನಗರ ಮತ್ತು ಗ್ರಾಮೀಣ ಆಸ್ತಿ ದಾಖಲೆಗಳನ್ನು ಸುಗಮಗೊಳಿಸಲು ಮತ್ತು ಕ್ರಮಬದ್ಧಗೊಳಿಸಲು, ವಿನ್ಯಾಸಗೊಳಿಸಲಾದ ನವೀಕರಿಸಿದ, ಡಿಜಿಟಲ್ ಆಸ್ತಿ ದಾಖಲಾತಿ ವ್ಯವಸ್ಥೆಗಳು, ಮಾಲಿಕತ್ವವನ್ನು ಹಾಗೂ ತೆರಿಗೆ ಸಂಗ್ರಹವನ್ನು ಪಾರದರ್ಶಕ ಮತ್ತು ಪರಿಣಾಮಕಾರಿಯಾಗಿ ಮಾಡಲಿದೆ.
ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗ್ರಾಮೀಣ ಅಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ಉಪಸ್ಥಿತರಿದ್ದರು.

<>><><*><><<>

ವಿಧಾನಸೌಧದ ನಿರ್ಮಾತೃ, ಮೈಸೂರು ರಾಜ್ಯದ ೨ನೇ ಮುಖ್ಯಮಂತ್ರಿಗಳು, ಕರ್ನಾಟಕ ಏಕೀಕರಣಕ್ಕಾಗಿ ಶ್ರಮಿಸಿದ ರಾಜ್ಯ ಕಂಡ ಹೆಮ್ಮೆಯ ನಾಯಕ ಕೆಂಗಲ್ ಹನುಮಂತಯ್ಯನವರ ಪುಣ್ಯಸ್ಮರಣೆಯ ಪ್ರಯುಕ್ತ ಇಂದು ವಿಧಾನಸೌಧದ ಆವರಣದಲ್ಲಿರುವ ಅವರ ಪ್ರತಿಮೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾಲಾರ್ಪಣೆ ಮಾಡಿ, ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ದಿವಂಗತ ಕೆಂಗಲ್ ಹನುಮಂತಯ್ಯ

ನವರ ಮೊಮ್ಮಗ ಕೆಂಗಲ್ ಶ್ರೀಪಾದ ರೇಣು ಅವರು ಉಪಸ್ಥಿತರಿದ್ದು, ಮುಖ್ಯಮಂತ್ರಿಗಳ ಜೊತೆಗೂಡಿ ಪ್ರತಿಮೆಗೆ ಪುಷ್ಪಗುಚ್ಛ ಸಮರ್ಪಿಸಿದರು. ಸಚಿವ ಪ್ರಿಯಾಂಕ್ ಖರ್ಗೆ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್ ಸೇರಿದಂತೆ ಹಲವು ಗಣ್ಯರು ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಕೆಂಗಲ್ ಹನುಮಂತಯ್ಯನವರ ನಾಡಿಗೆ ನೀಡಿದ ಕೊಡುಗೆ ಮತ್ತು ಆಡಳಿತಾತ್ಮಕ ದೂರದೃಷ್ಟಿಯನ್ನು ಸ್ಮರಿಸಲಾಯಿತು. ಜನಸೇವೆಯಲ್ಲಿ ಅಪಾರ ನಿಷ್ಠೆ ಮತ್ತು ಕಾಳಜಿಯನ್ನು ಹೊಂದಿದ್ದ ಕೆಂಗಲ್ ಹನುಮಂತಯ್ಯ ಅವರು, ಕನ್ನಡ ನಾಡು - ನುಡಿಯ ಬಗ್ಗೆಯೂ ಅಷ್ಟೇ ಪ್ರೀತಿ ಹೊಂದಿದ್ದರು. ಸ್ವಾತಂತ್ರ್ಯ ಹೋರಾಟಗಾರ, ಕರ್ನಾಟಕ ಏಕೀಕರಣ ಚಳವಳಿಯ ಮುಂಚೂಣಿ ನಾಯಕ, ವಿಧಾನಸೌಧದ ನಿರ್ಮಾತೃಗಳಾದ ಹನುಮಂತಯ್ಯನವರನ್ನು ಅವರ ಪುಣ್ಯಸ್ಮರಣೆಯ ದಿನ ಗೌರವದಿಂದ ನೆನೆದು, ನಮಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಕೆಂಗಲ್ ಹನುಮಂತಯ್ಯನವರ ಪ್ರತಿಮೆಯ ಬಳಿ ಭಾವಚಿತ್ರಕ್ಕೆ ಪುಷ್ಪ ಸಲ್ಲಿಸಿ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನಸೌಧವನ್ನು ಕೆಂಗಲ್ ಹನುಮಂತಯ್ಯನವರು ಕಟ್ಟಿದ್ದಾರೆ, ವಿಕಾಸಸೌಧವನ್ನು ಎಸ್.ಎಂ.ಕೃಷ್ಣ ಅವರು ಕಟ್ಟಿದ್ದಾರೆ, ಬೆಂಗಳೂರನ್ನು ಕೆಂಪೇಗೌಡರು ಕಟ್ಟಿದ್ದಾರೆ. ಇವೆಲ್ಲವೂ ಇಂದು ಸಾಕ್ಷಿಗಳಾಗಿ ಉಳಿದುಕೊಂಡಿವೆ. ನಮ್ಮ ಬೆಂಗಳೂರು ಎಲ್ಲದರಲ್ಲೂ ಉತ್ತಮವಾದ ಹಾಗೂ ಶ್ರೇಷ್ಠವಾದ ಜಾಗವಾಗಿದೆ. ಅಂದು ಕೆಂಗಲ್ ಹನುಮಂತಯ್ಯನವರು ಮುನ್ನುಡಿ ಬರೆದಿದ್ದಕ್ಕೆ ನಾವೆಲ್ಲರೂ ಇಲ್ಲಿದ್ದೇವೆ. ಅಧಿಕಾರ ಸಿಕ್ಕಾಗ ವಿಧಾನಸೌಧದಂತಹ ಸಾಕ್ಷಿಗಳನ್ನು ಬಿಟ್ಟು ಹೋಗಬೇಕು. ಈ ನಿಟ್ಟಿನಲ್ಲಿ ನಾವೆಲ್ಲರೂ ಕೆಲಸ ಮಾಡೋಣ ಎಂದು ಕರೆ ನೀಡಿದರು.

<>><><*><><<>

ಇಂದು ವಿಶ್ವ ಏಡ್ಸ್ ಜಾಗೃತಿ ದಿನಾಚರಣೆ. ಎಚ್.ಐ.ವಿ. ಹಾಗೂ ಏಡ್ಸ್ ಹರಡುವಿಕೆಯನ್ನು ನಿಯಂತ್ರಿಸುವಲ್ಲಿರುವ, ಅಡೆತಡೆಗಳನ್ನು ಕೊನೆಗಾಣಿಸುವುದು ಎಂಬ ಧ್ಯೇಯದೊಂದಿಗೆ, ಏಡ್ಸ್ ಜಾಗೃತಿ ದಿನಾಚರಣೆ ಕಾರ್ಯಕ್ರಮಗಳು ಜರುಗುತ್ತಿವೆ.

ಏಡ್ಸ್ ಬಗ್ಗೆ ಭಯಕ್ಕಿಂತ ಎಚ್ಚರವಿರಲಿ. ನಿಯಮಿತ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಿ, ಆರೋಗ್ಯಯುತ ಹವ್ಯಾಸಗಳನ್ನು ರೂಢಿಸಿಕೊಳ್ಳಿ, ರೋಗ ಹರಡುವಿಕೆಯ ಬಗ್ಗೆ ಜಾಗೃತಿಯಿಂದಿರಿ. ಏಡ್ಸ್ ಮುಕ್ತ ಕರ್ನಾಟಕ ನಿರ್ಮಾಣದ ಸಂಕಲ್ಪ ನಮ್ಮದು, ಇದಕ್ಕಾಗಿ ನಿಮ್ಮೆಲ್ಲರ ಬೆಂಬಲವೂ ಇರಲಿ. ಎಲ್ಲರೂ ಜೊತೆಗೂಡಿ ಆರೋಗ್ಯಯುತ ಸಮಾಜ ನಿರ್ಮಿಸೋಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ರಾಜ್ಯಾದ್ಯಂತ ಇರುವ ಹೆಚ್.ಐ.ವಿ ಸೋಂಕಿತರಿಗೆ ಆರೋಗ್ಯ ಇಲಾಖೆ ವತಿಯಿಂದ, ನಿಯಮಿತವಾಗಿ ತಪಾಸಣೆ, ಅಗತ್ಯ ಚಿಕಿತ್ಸೆ, ಉಚಿತ ಔಷಧ ವಿತರಣೆ ಮಾಡಲಾಗುತ್ತಿದೆ. ಅವರಲ್ಲಿ ಮಾನಸಿಕ ಧೈರ್ಯ ತುಂಬಿ, ಆತ್ಮವಿಶ್ವಾಸದಿಂದ ಜೀವಿಸುವಂತೆ ಮಾಡಬೇಕು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸಾಮಾಜಿಕ ಜಾಲತಾಣದ ಮೂಲಕ ಕರೆ ನೀಡಿದ್ದಾರೆ.

ವಿಶ್ವ ಏಡ್ಸ್ ಜಾಗೃತಿ ದಿನಾಚರಣೆ ಅಂಗವಾಗಿ ದಾವಣಗೆರೆಯಲ್ಲಿ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಏಡ್ಸ್ ಪ್ರತಿಬಂಧಕ ನಿಯಂತ್ರಣ ಘಟಕದಿಂದ ಜಿಲ್ಲಾ ಸರ್ಕಾರಿ ಆಸ್ಪತ್ರೆಯಲ್ಲಿ ಹಮ್ಮಿಕೊಂಡಿದ್ದ ಜಾಗೃತಿ

ಜಾಥಾಕ್ಕೆ ಜಿಲ್ಲಾ ಕುಟುಂಬ ಕಲ್ಯಾಧಿಕಾರಿ ಡಾ.ಷಣ್ಮುಖಪ್ಪ ಚಾಲನೆ ನೀಡಿದರು. ಜಾಥಾದಲ್ಲಿ ವಿವಿಧ ಶಾಲಾ, ಕಾಲೇಜು ಮಕ್ಕಳು, ಸ್ವಯಂ ಸೇವಾ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಬಳ್ಳಾರಿಯಲ್ಲಿ ಏಡ್ಸ್ ಜನ ಜಾಗ್ರುತಿ ಜಾಥಾ ನಡೆಯಿತು. ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಸಾರೆಡ್ಡಿ ಜಾಥಾಗೆ ಚಾಲನೆ ನೀಡಿದರು. ಜಾಥಾದಲ್ಲಿ ಪಾಲ್ಗೊಂಡಿದ್ದ ವಿದ್ಯಾರ್ಥಿಗಳು ಎಡ್ಸ್ ತಡೆಗಟ್ಟುವ ಕುರಿತ ಘೋಷವಾಕ್ಯಗಳ ಫಲಕ ಹಿಡಿದು ನಗರದ ಪ್ರಮುಖ ರಸ್ತೆಯಲ್ಲಿ ಸಾಗಿದರು.

<>><><*><><<>

ರಾಜಕೀಯ ದ್ವೇಷಕ್ಕಾಗಿ ಕೇಂದ್ರ ಸರ್ಕಾರ ತನಿಖಾ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ರಾಹುಲ್ ಗಾಂಧಿ ಅವರಿಗೆ ಕಿರುಕುಳ ನೀಡುತ್ತಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆರೋಪಿಸಿದ್ದಾರೆ. ವಿಧಾನಸೌಧದಲ್ಲಿ ಅವರು, ಸುದ್ದಿಗಾರರು ರಾಹುಲ್ ಗಾಂಧಿ ಅವರ ಮೇಲೆ ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಎಫ್‌ಐಆರ್ ದಾಖಲಿಸಿರುವ ಬಗ್ಗೆ ಪ್ರಶ್ನಿಸಿದಾಗ ನ್ಯಾಷನಲ್ ಹೆರಾಲ್ಡ್ ಸೋನಿಯಾ ಗಾಂಧಿ ಅಥವಾ ರಾಹುಲ್ ಗಾಂಧಿ ಅವರ ಆಸ್ತಿಯಲ್ಲ. ಪಕ್ಷದ ಅಧ್ಯಕ್ಷ ಸ್ಥಾನದಲ್ಲಿದ್ದ ಕಾರಣಕ್ಕೆ ಅವರು ಈ ಸಂಸ್ಥೆಯ ಷೇರುಗಳ ಪಾಲಕರಾಗಿದ್ದರು. ಅಧಿಕಾರ ಮುಗಿದ ನಂತರ ಈ ಷೇರುಗಳು ವರ್ಗಾವಣೆಯಾಗುತ್ತದೆ. ಜವಾಹರ್‌ಲಾಲ್ ನೆಹರೂ ಅವರ ಕಾಲದಿಂದ ನಡೆದುಕೊಂಡು ಬಂದಿರುವಂತೆ ನ್ಯಾಷನಲ್ ಹೆರಾಲ್ಡ್ ಸಂಸ್ಥೆಯ ಜವಾಬ್ದಾರಿಯನ್ನು ಅವರು ವಹಿಸಿಕೊಂಡಿದ್ದಾರೆ ಎಂದು ವಿವರಿಸಿದರು. ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಉಪಹಾರಕೂಟಕ್ಕೆ ಆಹ್ವಾನಿಸಿದ್ದೀರಾ ಎಂದು ಸುದ್ದಿಗಾರರು ಕೇಳಿದ ಪ್ರಶ್ನೆಗೆ "ಇದು ತಮಗೂ ಹಾಗೂ ಮುಖ್ಯಮಂತ್ರಿಗಳಿಗೆ ಸಂಬಂಧಿಸಿದ ವಿಚಾರ. ನಾವಿಬ್ಬರು ಸಹೋದರರಂತೆ ಕೆಲಸ ಮಾಡಿಕೊಂಡು ಹೋಗುತ್ತಿದ್ದೇವೆ. ಪಕ್ಷದ ವಿಚಾರ ಬಂದಾಗ ಎಲ್ಲರನ್ನು ಒಟ್ಟಾಗಿ ತೆಗೆದುಕೊಂಡು ಹೋಗುತ್ತೇವೆ. ಈ ಬಗ್ಗೆ ಚಿಂತೆ ಬೇಡ ಎಂದು ತಿಳಿಸಿದ್ದಾರೆ.

<>><><*><><<>

ರಾಜ್ಯದಲ್ಲಿ ನವೋದ್ಯಮ ಹೂಡಿಕೆಯಲ್ಲಿ ಶೇಕಡಾ ೪೦ ರಷ್ಟು ಕುಸಿತದ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಅವರನ್ನು ಬಿಜೆಪಿ ಟೀಕಿಸಿದೆ. ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ವಿರೋಧ ಪಕ್ಷದ ನಾಯಕ ಆರ್.ಅಶೋಕ ಇದು ಪ್ರಿಯಾಂಕ್ ಖರ್ಗೆ ಅವರ ಕೆಲಸದ ಶೈಲಿ ಎಂದು ವ್ಯಂಗ್ಯವಾಡಿದ್ದಾರೆ. ಸಚಿವ ಪ್ರಿಯಾಂಕ್ ಖರ್ಗೆ ಅವರ ನಿರಾಸಕ್ತಿ, ನಿಷ್ಕ್ರಿಯತೆ ಪರಿಣಾಮವಾಗಿ ರಾಜ್ಯದಲ್ಲಿ ಸ್ಟಾರ್ಟ್ ಅಪ್ ಹೂಡಿಕೆ ಶೇಕಡಾ ೪೦ರಷ್ಟು ಭಾರಿ ಕುಸಿತ ಕಂಡಿದೆ. ನವೋದ್ಯಮಗಳ ರಾಜಧಾನಿ ಎಂದು ಖ್ಯಾತಿ ಪಡೆದಿದ್ದ ಕರ್ನಾಟಕ ಮತ್ತು ಬೆಂಗಳೂರು ಇಂದು ಅನ್ಯರಾಜ್ಯಗಳ ಮುಂದೆ ತಲೆತಗ್ಗಿಸುವಂತಾಗಿದೆ ಎಂದು ತಿಳಿಸಿದ್ದಾರೆ.

<>><><*><><<>

ಕೇಂದ್ರೀಯ ಆಯುರ್ವೇದ ಸಂಶೋಧನಾ ಸಂಸ್ಥೆ, ಕೇಂದ್ರೀಯ ಆಯುರ್ವೇದ ವಿಜ್ಞಾನ ಸಂಶೋಧನಾ ಸಮಿತಿ, ನಿಮ್ಹಾನ್ಸ್, ಭಾರತೀಯ ವಿಜ್ಞಾನ ಸಂಸ್ಥೆ, ಭಾರತ ಸರ್ಕಾರದ ಆಯುಷ್ ಸಚಿವಾಲಯದ ಸಂಯುಕ್ತ ಆಶ್ರಯದಲ್ಲಿ ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ಇಂದು ಮತ್ತು ನಾಳೆ ಸ್ಥೂಲಕಾಯ ಮತ್ತು ಜೀರ್ಣಾಂಗ ಸಮಸ್ಯೆಗಳಿಗೆ ಆಯುರ್ವೇದದ ಸಂಯೋಜಿತ ವಿಧಾನಗಳ ಕುರಿತು ಎರಡು ದಿನಗಳ

ಕಾರ್ಯಾಗಾರ ನಡೆಯಲಿದೆ. ಸಂಶೋಧಕರು, ವಿದ್ವಾಂಸರು, ಔಷಧಿ ಸಂಸ್ಥೆಗಳು, ವೈದ್ಯರು ಮತ್ತು ವಿಜ್ಞಾನಿಗಳು ಭಾಗವಹಿಸುತ್ತಿದ್ದಾರೆ.

<>><><*><><<>

ಪ್ರವಾಸಕ್ಕೆ ಬಂದಿದ್ದ ಮೈಸೂರಿನ ಶಾಲೆಯ ವಿದ್ಯಾರ್ಥಿಗಳಿದ್ದ ಬಸ್ ಉತ್ತರಕನ್ನಡ ಜಿಲ್ಲೆಯ ಹೊನ್ನಾವರ ತಾಲ್ಲೂಕಿನ ಗೇರುಸೊಪ್ಪ ಸಮೀಪ ಸೂಳೆಮುರ್ಕಿ ಇಳಿಜಾರಿನ ತಿರುವಿನಲ್ಲಿ ನಿನ್ನೆ ಮಗುಚಿ ಓರ್ವ ವಿದ್ಯಾರ್ಥಿ ಮೃತಪಟ್ಟು ೩೫ ವಿದ್ಯಾರ್ಥಿಗಳು ಹಾಗೂ ಇಬ್ಬರು ಶಿಕ್ಷಕರು ಗಾಯಗೊಂಡಿದ್ದಾರೆ. ಮೈಸೂರಿನ ಟಿ.ಕೆ.ಲೇಔಟ್‌ನ ತರಳಬಾಳು ಪ್ರೌಢಶಾಲೆಯ ಪವನ್ ಮೃತ ವಿದ್ಯಾರ್ಥಿ. ಶಾಲಾ ಮಕ್ಕಳ ತಂಡ ಜೋಗ ಜಲಪಾತ ವೀಕ್ಷಿಸಿ ಗೋಕರ್ಣಕ್ಕೆ ಹೋಗುವಾಗ ಈ ಅಪಘಾತ ಸಂಭವಿಸಿದೆ. ಗಾಯಗೊಂಡ ವಿದ್ಯಾರ್ಥಿಗಳನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

<>><><*><><<>

ಬಂಗಾಳ ಕೊಲ್ಲಿಯಲ್ಲಿ ಚೆನ್ನೈನಿಂದ ಸುಮಾರು ೫೦ ಕಿಲೋಮೀಟರ್ ದೂರದಲ್ಲಿ ರೂಪುಗೊಂಡಿದ್ದ ದಿತ್ವಾ ಚಂಡಮಾರುತವು ಪ್ರಸ್ತುತ ದುರ್ಬಲಗೊಂಡಿದೆ. ಇದರಿಂದ ರಾಜ್ಯದ ಮೇಲೆ ಗಂಭೀರ ಪರಿಣಾಮ ಬೀರುವ ಸಾಧ್ಯತೆ ಕಡಿಮೆ ಇದ್ದು, ಕೆಲವು ಕಡೆ ಹಗುರ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಸಿಎಸ್ ಪಾಟೀಲ್ ತಿಳಿಸಿದ್ದಾರೆ. ಇಂದಿನಿಂದ ಇದೇ ೪ ರವರೆಗೆ ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಬೆಂಗಳೂರು, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ, ಹಾಸನ, ಕೊಡಗು, ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಕೆಲವು ಭಾಗಗಳಲ್ಲಿ ಹಗುರ ಮಳೆಯಾಗುವ ನಿರೀಕ್ಷೆಯಿದೆ ಎಂದು ಅವರು ತಿಳಿಸಿದ್ದಾರೆ. ಕಳೆದ ನಾಲ್ಕೈದು ದಿನಗಳಿಂದ ರಾಜ್ಯಾದ್ಯಂತ ಗರಿಷ್ಠ ಉಷ್ಣಾಂಶದಲ್ಲಿ ಭಾರಿ ಇಳಿಮುಖ ಕಂಡುಬಂದಿದೆ. ಬೆಂಗಳೂರಿನಲ್ಲಿ ಗರಿಷ್ಠ ಉಷ್ಣಾಂಶ ೨೧ ಡಿಗ್ರಿ ಸೆಂಟಿಗ್ರೇಡ್‌ಗೆ ಕುಸಿದಿದೆ. ರಾತ್ರಿ ಮತ್ತು ಹಗಲಿನ ನಡುವಿನ ತಾಪಮಾನ ವ್ಯತ್ಯಾಸ ಕೇವಲ ೨-೩ ಡಿಗ್ರಿ ಸೆಂಟಿಗ್ರೇಡ್‌ಗೆ ಇಳಿದಿರುವುದು ಚಳಿಯ ಅನುಭವವನ್ನು ಹೆಚ್ಚಿಸಿದೆ. ಬೆಂಗಳೂರಿನಲ್ಲಿ ಇಂದಿನಿಂದ ಮೂರನೇ ತಾರೀಖಿನವರೆಗೆ ಚಳಿಯ ವಾತಾವರಣ ಮುಂದುವರಿದು, ನಂತರ ಬಿಸಿಲು ಮೂಡುವ ಸಾಧ್ಯತೆಯಿದೆ ಎಂದು ಅವರು ತಿಳಿಸಿದ್ದಾರೆ.

<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ ><><<>